# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:–** ಕರ್ನಾಟಕ ಸಹಕಾರಿ ಹಾಲು ಉತ್ಪಾದಕರ ಮಹಾಮಂಡಳಿ ನಿಯಮಿತ, ಬೆಂಗಳೂರು ರವರು ಕ್ಷೀರಭಾಗ್ಯ ಯೋಜನೆಗೆ ಸರಬರಾಜು ಮಾಡುವ ಕೆನೆಭರಿತ ಹಾಲಿನ ಪುಡಿಯ ದರವನ್ನು ಪರಿಷ್ಕರಿಸಿ ಆದೇಶಿಸುವ ಬಗ್ಗೆ.

**ಓದಲಾಗಿದೆ:–** 1. ಜಂಟಿ ನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಬೆಂಗಳೂರು ರವರಪತ್ರಸಂ:ಎಂ:2/ಅ.ದಾ/ಮ.ಉ.ಯೋ/13/2013–14,ದಿ: 15.03.2014.

2. ಆರ್ಥಿಕ ಇಲಾಖೆಯ ಕಡತ ಸಂಖ್ಯೆ: ಆಇ ವೆ–4/2014, ದಿ: 27.03.2014.

***

**ಪ್ರಸ್ತಾವನೆ:–**

1. ಮೇಲೆ ಓದಲಾದ (1)ರ ಜಂಟಿ ನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಬೆಂಗಳೂರು ರವರ ಪತ್ರದಲ್ಲಿ ಮಾನ್ಯ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ದಿ: 31.01.2014ರಂದು ನಡೆದ ಸಭೆಯ ನಡಾವಳಿಯನ್ವಯ ಕೆನೆಭರಿತ ಹಾಲಿನ ಪುಡಿಯ ದರವನ್ನು ಪರಿಷ್ಕರಿಸಿ ಆದೇಶ ಹೊರಡಿಸಲು ಕೋರಿದ್ದಾರೆ.

2. ಮೇಲೆ ಓದಲಾದ (2)ರ ಆರ್ಥಿಕ ಇಲಾಖೆಯ ಟಿಪ್ಪಣಿಯಲ್ಲಿ ಕ್ಷೀರ ಭಾಗ್ಯ ಯೋಜನೆಯಲ್ಲಿ ಕೆನೆಭರಿತ/ಕೆನೆರಹಿತ ಹಾಲಿನ ಪುಡಿ ದರ ಪರಿಷ್ಕರಿಸುವ ಕುರಿತಂತೆ, ದಿ: 31–01–2014ರಂದು ಮಾನ್ಯ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ತೆಗೆದುಕೊಂಡಿರುವ ತೀರ್ಮಾನದಂತೆ ಕೆ.ಎಂ.ಎಫ್. ಸರಬರಾಜು ಮಾಡುತ್ತಿರುವ ಹಾಲಿನ ಪುಡಿ ದರಗಳನ್ನು ದಿನಾಂಕ: 01–02–2014ರಿಂದ ಜಾರಿಗೆ ಬರುವಂತೆ ಪರಿಷ್ಕರಿಸಲು ಆರ್ಥಿಕ ಇಲಾಖೆಯು ಸಹಮತಿ ನೀಡಿದ್ದು, ಶಾಲೆಗಳಿಗೆ ಸರಬರಾಜು ಮಾಡುವ ಕೆನೆಭರಿತ ಹಾಲಿನ ಪುಡಿಯ (WWP) ಪ್ರತಿ ಕೆ.ಜಿ. ರೂ.255/– + ತೆರಿಗೆಯಂತೆ ನಿಗದಿಪಡಿಸಲು ತಿಳಿಸಿರುತ್ತಾರೆ.

M2
29/3/14

3. ಸದರಿ ಪ್ರಸ್ತಾವನೆ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಇಡಿ : 12 ಎಂಎಂಎಸ್ 2014, ಬೆಂಗಳೂರು ದಿನಾಂಕ : 29–03–2014**

4. ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಕ್ಷೀರ ಭಾಗ್ಯ ಯೋಜನೆಯಲ್ಲಿ ಶಾಲೆಗಳಿಗೆ ಸರಬರಾಜು ಮಾಡುವ ಕೆನೆಭರಿತ ಹಾಲಿನ ಪುಡಿಯ (WWP) ದರವನ್ನು ಪ್ರತಿ ಕೆ.ಜಿ. ರೂ.255/– + ತೆರಿಗೆಯಂತೆ ನಿಗದಿಪಡಿಸಿ ಈ ದರಗಳನ್ನು ದಿ: 01.02.2014 ರಿಂದ ಜಾರಿಗೆ ಬರುವಂತೆ ಪರಿಷ್ಕರಿಸಲು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಅನುಮತಿ ನೀಡಿದೆ.

5. ಈ ಬಗ್ಗೆ ದರ ಪರಿಷ್ಕರಣೆಯಿಂದ ಉಂಟಾಗುವ ರೂ.8.32 ಕೋಟಿಗಳನ್ನು 2013–14ನೇ ಸಾಲಿಗೆ ಒದಗಿಸಿದ ಆಯವ್ಯಯದಿಂದ ಭರಿಸಲು ಅನುಮತಿಸಿದೆ ಹಾಗೂ 2014–15ನೇ ಸಾಲಿಗೆ ಕೊರತೆಯಾದರೆ ವಿವರಗಳನ್ನು ನೀಡಿ ಹೆಚ್ಚುವರಿಗೆ ಪ್ರಸ್ತಾವನೆ ಸಲ್ಲಿಸಲು ತಿಳಿಸಿದೆ.

6. ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 429 ವೆಚ್ಚ–8/2014, ದಿ: 28.02.2014ರ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಐ.ಎಫ್. ಮಾಗಿ)
ವಿಶೇಷಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ
ಶಿಕ್ಷಣ ಇಲಾಖೆ (ಯೋಜನೆ).
29/3/14

ಇವರಿಗೆ,

1. ಮಹಾಲೇಖಪಾಲಕರು, ಕರ್ನಾಟಕ (ಆಡಿಟ್ 1 & 2) ಬೆಂಗಳೂರು.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು,
3. ಜಂಟಿ ನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ನಿರ್ದೇಶಕರು, ಖಜಾನಾ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, ಬೆಂಗಳೂರು.
5. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
6. ವ್ಯವಸ್ಥಾಪಕ ನಿರ್ದೇಶಕರು, ಕೆ.ಎಮ್.ಎಫ್. ಬೆಂಗಳೂರು.
7. ಉಪನಿರ್ದೇಶಕರು, ಖಜಾನಾ ಗಣಕ ಕೇಂದ್ರ, ನಂ.49, ಖನಿಜ ಭವನ, ರೇಸ್ ಕೋರ್ಸ್‌ರಸ್ತೆ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, (ವೆಚ್ಚ–7&8) ಆರ್ಥಿಕ ಇಲಾಖೆ, ಬೆಂಗಳೂರು.
9. ಸರ್ಕಾರದ ಕಾರ್ಯದರ್ಶಿಗಳು (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ), ಶಿಕ್ಷಣ ಇಲಾಖೆ, ಬೆಂಗಳೂರು ಇವರ ಆಪ್ತ ಕಾರ್ಯದರ್ಶಿಗಳು.
10. ಎಲ್ಲಾ ಜಿಲ್ಲಾ ಉಪ ನಿರ್ದೇಶಕರು, ಸಾರ್ವಜನಿ ಶಿಕ್ಷಣ ಇಲಾಖೆ, ಬೆಂಗಳೂರು. (ಆಯುಕ್ತರ ಮುಖಾಂತರ)
11. ಕೋ. ಆರ್ಡಿನೇಟರ್, ಮಾಹಿತಿ ಕೇಂದ್ರ, ಶಿಕ್ಷಣ ಇಲಾಖೆ, ಬೆಂಗಳೂರು.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.